ತಾಲ್ಲೂಕು		ಮನೆ ಸಂಖ್ಯೆ
ಬಿಜಾಪುರ	...	833
ಮುದ್ದೇಬಿಹಾಳ	...	94
ಇಂಡಿ	...	695
ಬಸವನಬಾಗೇವಾಡಿ	...	295
ಸಿಂಧಗಿ	...	281
	ಒಟ್ಟು	2198

ಆಲಮಟ್ಟಿ ನಾರಾಯಣಪುರ ರಸ್ತೆ

227 (287) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) – ಜಲಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಆಲಮಟ್ಟಿ–ನಾರಾಯಣಪುರ ರಸ್ತೆ ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;

ಆ) ಬಂದಿದ್ದಲ್ಲಿ, ಈ ಕಾಮಗಾರಿಗೆ ಸರ್ಕಾರದಿಂದ ಎಷ್ಟು ಹಣ ಮೀಸಲಿರಿಸಲಾಗಿದೆ;

ಇ) ಮೀಸಲಿರಿಸಿದ್ದಲ್ಲಿ, ಈ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು (ವಿವರ ನೀಡುವುದು)?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು):–

ಅ) ಬಂದಿದೆ

ಆ) ಲೋಕೋಪಯೋಗಿ ಇಲಾಖೆಗೆ ಹಸ್ತಾಂತರಿಸುವ ಉದ್ದೇಶವಿದ್ದುದರಿಂದ ಯಾವುದೇ ಹಣ ಮೀಸಲಿಟ್ಟಿರುವುದಿಲ್ಲ.

ಇ) ನಿಗಮದಡಿಯಲ್ಲಿ ಹಣವನ್ನು ಒದಗಿಸಿಕೊಂಡು ದುರಸ್ಥಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಜಮೀನುಗಳ ಭೂ ಪರಿವರ್ತನೆ

228 (813) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)– ಕಂದಾಯ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಮನಗರ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಲ್ಲಿ ಜಮೀನುಗಳನ್ನು ಭೂ ಪರಿವರ್ತನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಯಾವ ಯಾವ ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡಲಾಗಿದೆ ಮತ್ತು ಎಷ್ಟೆಷ್ಟು ಜಮೀನುಗಳನ್ನು ಭೂಪರಿವರ್ತನೆ ಮಾಡಲಾಗಿದೆ (ವರ್ಷಾವಾರು ವಿವರಗಳನ್ನು ನೀಡುವುದು)?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು):–

ಅ) ಹೌದು

ಆ) ವಾಸದ, ವಾಣಿಜ್ಯ ಕೈಗಾರಿಕೆ ಹಾಗೂ ಶೈಕ್ಷಣಿಕ ಉದ್ದೇಶಕ್ಕಾಗಿ ಒಟ್ಟು 195.09 ಎಕರೆ ಜಮೀನನ್ನು ಭೂ ಪರಿವರ್ತನೆ ಮಾಡಲಾಗಿದೆ. ವರ್ಷಾವಾರು ವಿವರಗಳು ಈ ಕೆಳಕಂಡಂತಿದೆ.

ವರ್ಷ		ವಿಸ್ತೀರ್ಣ (ಎ/ಗು)
2007–08	...	...
2008–09	...	20.00
2009–10	...	120.20
2010–11	...	54.29
	ಒಟ್ಟು	195.09

ಸಣ್ಣ ಕೆರೆಗಳು

229 (427) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ)– ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿರುವ ಸಣ್ಣ ನೀರಾವರಿ ಕೆರೆಗಳ ಸಂಖ್ಯೆ ಎಷ್ಟು ಮತ್ತು ಯಾವುವು (ವಿವರ ನೀಡುವುದು);

ಆ) ಪ್ರಸ್ತುತ ಕೆರೆಗಳು ಯಾವ ಸ್ಥಿತಿಯಲ್ಲಿವೆ;

ಇ) ಈ ಕೆರೆಗಳಿಂದ ಎಷ್ಟು ರೈತರಿಗೆ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆ (ವಿವರಗಳನ್ನು ಒದಗಿಸುವುದು)

ಈ) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸ ಕೆರೆಗಳನ್ನು